ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಡಯಾಲಿಸಿಸ್ ಸೌಲಭ್ಯ

544 (679) ಶ್ರೀ ಮುನಿರಾಜು ಎಸ್ (ದಾಸರಹಳ್ಳಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳನ್ನು ಉತ್ತರಿಸುವರೆ

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ ಹೊಂದಿರುವ ಆಸ್ಪತ್ರೆಗಳಾವುವು; ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು (ಸರ್ಕಾರಿ ನಿಯಮಾವಳಿ ಪ್ರಕಾರ)

ಆ) ರಾಜ್ಯದ ಇತರೆ ಖಾಸಗಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು' ಆಸ್ಪತ್ರೆವಾರು ವಿವರ ನೀಡುವುದು;

ಇ) ಬಡ ರೋಗಿಗಳಿಗಾಗಿ ಕಡಿಮೆ ದರದಲ್ಲಿ ಡಯಾಲಿಸಿಸ್ ಸೌಲಭ್ಯವು ದೂರಕುವಂತಾಗಲು ಸರ್ಕಾರಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಶ್ರೀರಾಮುಲು: (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಆರೋಗ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಆಸ್ಪತ್ರೆಗಳಾದ ಗುಲ್ಬರ್ಗಾ, ಬೀದರ್, ಬಿಜಾಪುರ, ಬಾಗಲಕೋಟೆ,, ಕಾರವಾರ, ಚಿತ್ರದುರ್ಗ, ಚಾಮರಾಜನಗರ, ಚಿಕ್ಕಮಗಳೂರು, ಉಡುಪಿ, ದಾವಣಗೆರೆ, ಶಿವಮೊಗ್ಗ ಮತ್ತು ಕೆ.ಸಿ. ಜನರಲ್ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ ಲಭ್ಯವಿದೆ.

ಡಯಾಲಿಸಿಸ್ ಸೌಲಭ್ಯವನ್ನು ಬಡತನ ರೇಖೆಗಿಂತ ಕೆಳಗಿರುವ ರೋಗಿಗಳಿಗೆ ಉಚಿತವಾಗಿ ಹಾಗೂ ಇತರೆ ರೋಗಿಗಳಿಗೆ ಪ್ರತಿ ಡಯಾಲಿಸಿಸ್‌ಗೆ ರೂ. 350/ ಶುಲ್ಕವನ್ನು ವಿಧಿಸಲಾಗುತ್ತಿದೆ.

ಆ) ಖಾಸಗಿ ಆಸ್ಪತ್ರೆಗಳು ವಿವಿಧ ಚಿಕಿತ್ಸೆ ನೀಡಲು ರೋಗಿಗಳಿಗೆ ವಿಧಿಸುತ್ತಿರುವ ಶಲ್ಕ ಕುರಿತ ಮಾಹಿತಿಯನ್ನು ಇದುವರೆವಿಗೆ ಸರ್ಕಾರಕ್ಕೆ ಒದಗಿಸುತ್ತಿಲ್ಲ. ಸರ್ಕಾರವು ದಿನಾಂಕ: 10-11-2009 ರಿಂದ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮವನ್ನು ಜಾರಿಗೆ ತಂದಿದೆ. ಈ ಕಾಯ್ದೆಯಡಿ ನೋಂದಾಣಿಗಾಗಿ ಹಲವು ಖಾಸಗಿ ಸಂಸ್ಥೆಗಳಿಂದ ಅರ್ಜಿಗಳನ್ನು ಸ್ವೀಕರಿಸಿದ್ದು, ಅವುಗಳು ನೋಂದಣಿ ಪ್ರಾಧಿಕಾರದ ಪರಿಶೀಲನೆಯಲ್ಲವೆ ಈ ಕಾಯ್ದೆ ಜಾರಿಗೆ ಬಂದ ನಂತರ, ಖಾಸಗಿ ಸಂಸ್ಥೆಗಳು ವಿವಿಧ ಚಿಕಿತ್ಸೆ ನೀಡಲು ರೋಗಿಗಳಿಗೆ ವಿಧಿಸುತ್ತಿರುವ ದರ ಕುರಿತಂತೆ ಸಾರ್ವಜನಿಕರಿಗೆ ಮಾಹಿತಿ ಫಲಕದಲ್ಲಿ ಪ್ರದರ್ಶಿಸುವುದು ಕಡ್ಡಾಯವಾಗಿದೆ.

ಇ) ಮೇಲೆ ತಿಳಿಸಿದ ಜಿಲ್ಲಾ ಆಸ್ಪತ್ರೆಗಳಲ್ಲದೆ ಜಿಲ್ಲಾ ಆಸ್ಪತ್ರೆಗಳಾದ ಕೋಲಾರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ, ಗದಗ, ಧಾರವಾಡ, ಸಾರ್ವಜನಿಕ ಆಸ್ಪತ್ರೆಗಳಾದ ಸಾರ್ವಜನಿಕ ಆಸ್ಪತ್ರೆ ಸಾಗರ, ಸಾರ್ವಜನಿಕ ಆಸ್ಪತ್ರೆ, ಹೊಸಪೇಟೆ ಹಾಗೂ ಸಾರ್ವಜನಿಕ ಆಸ್ಪತ್ರೆ, ಜಯನಗರ, ಬೆಂಗಳೂರುಗಳಲ್ಲಿ ಹೊಸದಾಗಿ ಡಯಾಲಿಸಿಸ್ ಸೌಲಭ್ಯ ಸ್ಥಾಪನೆಗೆ ಸರ್ಕಾರವು ಈಗಾಗಲೇ ಮಂಜೂರಾತಿ ನೀಡಲಾಗಿದೆ.